## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2019–20ನೇ ಸಾಲಿನಲ್ಲಿ ಬೆಳೆ ಸಮೀಕ್ಷೆಯ ಕಾರ್ಯಕ್ರಮವನ್ನು ಅನುಷ್ಠಾನ ಗೊಳಿಸುವಲ್ಲಿ ರಾಜ್ಯ ಮಟ್ಟದಲ್ಲಿ ಕಾರ್ಯ ತಂಡ (Working Group) ವನ್ನು ರಚಿಸುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ಆದೇಶ ಸಂಖ್ಯೆ:ಕೃಇ/34/ಕೃಕೈಇ/2019, ದಿನಾಂಕ:05.07.2019.
2. ಸರ್ಕಾರದ ಆದೇಶ ಸಂಖ್ಯೆ:ಕೃಇ/34/ಕೃಕೈಇ/2019(1), ದಿನಾಂಕ:05.07.2019.
3. ಆಯುಕ್ತರು, ಕೃಷಿ ಇಲಾಖೆ ಇವರ ಕಚೇರಿಯಿಂದ ಸ್ವೀಕೃತವಾಗಿರುವ ಏಕ ಕಡತ ಸಂಖ್ಯೆ: ಉನಿ/ಬೆ.ಸ/ಸುತ್ತೋಲೆ/19–20

**ಪ್ರಸ್ತಾವನೆ:**

ಮೇಲೆ ಕ್ರಸಂ.(1) ಮತ್ತು (2) ರಲ್ಲಿ ಓದಲಾದ ಸರ್ಕಾರದ ಆದೇಶಗಳಲ್ಲಿ ಬೆಳೆ ಸಮೀಕ್ಷೆ ಕಾರ್ಯಕ್ರಮವನ್ನು 2019–20ನೇ ಸಾಲಿನಲ್ಲಿ ಅನುಷ್ಠಾನಗೊಳಿಸುವ ಬಗ್ಗೆ ಆದೇಶಿಸಲಾಗಿರುತ್ತದೆ.

ಮೇಲೆ ಕ್ರಮ ಸಂಖ್ಯೆ (3) ರಲ್ಲಿನ ಆಯುಕ್ತರು, ಕೃಷಿ ಇಲಾಖೆ ರವರ ಏಕ ಕಡತದಲ್ಲಿ ಬೆಳೆ ಸಮೀಕ್ಷೆ ಕಾರ್ಯಕ್ರಮವನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಲು ರಾಜ್ಯ ಮಟ್ಟದಲ್ಲಿ ಉಸ್ತುವಾರಿ ಹಾಗೂ ಯೋಜನೆಯ ಅನುಷ್ಠಾನ ಪರಿಶೀಲನೆಗಾಗಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣ ಇಲಾಖೆ (ಇ-ಆಡಳಿತ)ಯ ಕೇಂದ್ರ ಕಚೇರಿಯಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳನ್ನು ಒಳಗೊಂಡ ಕಾರ್ಯ ತಂಡವನ್ನು (Working Group) ರಚಿಸುವಂತೆ ಕೋರಲಾಗಿರುತ್ತದೆ.

ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಸರ್ಕಾರವು ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಕೃಇ/34/ಕೃಕೈಇ/2019(ಭಾ–1), ದಿನಾಂಕ:23.07.2019.**

2019–20ನೇ ಸಾಲಿನಲ್ಲಿ ಬೆಳೆ ಸಮೀಕ್ಷೆ ಯೋಜನೆಯನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಲು ರಾಜ್ಯ ಮಟ್ಟದಲ್ಲಿ ಉಸ್ತುವಾರಿ ಹಾಗೂ ಯೋಜನೆಯ ಅನುಷ್ಠಾನ ಪರಿಶೀಲನೆಗಾಗಿ ವಿವಿಧ ಇಲಾಖೆಗಳ ಈ ಕೆಳಕಂಡ ಅಧಿಕಾರಿಗಳನ್ನು ಒಳಗೊಂಡ ಕಾರ್ಯ ತಂಡವನ್ನು (Working Group) ರಚಿಸಿ ಆದೇಶಿಸಲಾಗಿದೆ.

| ಕ್ರಸಂ | ಹುದ್ದೆ ಮತ್ತು ಪದನಾಮ |
|---|---|
| 1 | ಶ್ರೀ ಬಿ.ಶಿವರಾಜು,<br>ವ್ಯವಸ್ಥಾಪಕ ನಿರ್ದೇಶಕರು, KAPPEC ಸಂಸ್ಥೆ, ಬೆಂಗಳೂರು. |
| 2 | ಶ್ರೀ ಪ್ರಭಾಕರ.ಬಿ.ಎನ್, ಉಪ ಕೃಷಿ ನಿರ್ದೇಶಕರು,<br>ಬೆಳೆ ವಿಮೆ ವಿಭಾಗ, ಕೇಂದ್ರ ಕಛೇರಿ, ಕೃಷಿ ಇಲಾಖೆ, ಬೆಂಗಳೂರು. |
| 3 | ಶ್ರೀಮತಿ ಎಂ.ಎನ್.ಸಂಧ್ಯ, ಉಪ ಕೃಷಿ ನಿರ್ದೇಶಕರು, ಕೇಂದ್ರ ಕಛೇರಿ,<br>ರೇಷ್ಮೆ ಇಲಾಖೆ, ಬೆಂಗಳೂರು. |
| 4 | ಶ್ರೀ ರಫಿ, ಸಹಾಯಕ ತೋಟಗಾರಿಕ ನಿರ್ದೇಶಕರು, (ಯೋಜನೆ) ಕೇಂದ್ರ<br>ಕಛೇರಿ ತೋಟಗಾರಿಕಾ ಇಲಾಖೆ, ಲಾಲಬಾಗ್, ಬೆಂಗಳೂರು. |

--

| | |
|---|---|
| 5 | ಶ್ರೀಮತಿ ಶ್ರೀಲಕ್ಷ್ಮಿ, ಸಹಾಯಕ ತೋಟಗಾರಿಕಾ ಅಧಿಕಾರಿ, ಕೇಂದ್ರ ಕಛೇರಿ, ಲಾಲಬಾಗ್, ಬೆಂಗಳೂರು. |
| 6 | ಶ್ರೀ ಭೊಮೇಶ.ಜೆ.ಸಿ, ಸಹಾಯಕ ತೋಟಗಾರಿಕಾ ಅಧಿಕಾರಿ, ಕೇಂದ್ರ ಕಛೇರಿ, ಲಾಲಬಾಗ್, ಬೆಂಗಳೂರು. |
| 7 | ಶ್ರೀ ತೌಫೀಕ್, ಸಹಾಯಕ ತೋಟಗಾರಿಕೆ ಅಧಿಕಾರಿ, ಬಂಗಾರಪೇಟೆ, ಕೋಲಾರ ಜಿಲ್ಲೆ. |
| 8 | ಶ್ರೀಮತಿ ಸುಮನ್ ನೆಲ್ಲಿಕೊಪ್ಪ, ಕೃಷಿ ಅಧಿಕಾರಿ, ಕೇಂದ್ರ ಕಛೇರಿ, ಕೃಷಿ ಇಲಾಖೆ, ಬೆಂಗಳೂರು. |
| 9 | ಶ್ರೀಮತಿ ಅರ್ಪಣ ಜೆ, ಕೃಷಿ ಅಧಿಕಾರಿ, ರೈತ ಸಂಪರ್ಕ ಕೇಂದ್ರ, ಚಿಕ್ಕಜಾಲ, ಬೆಂಗಳೂರು ಉತ್ತರ ತಾಲ್ಲೂಕು, ಕೃಷಿ ಇಲಾಖೆ, ಬೆಂಗಳೂರು. |

ಸಂಬಂಧಪಟ್ಟ ಇಲಾಖೆಗಳ ಮುಖ್ಯಸ್ಥರು ಮೇಲ್ಕಂಡ ಅಧಿಕಾರಿಗಳನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣ ಇಲಾಖೆಯ (ಇ–ಆಡಳಿತ) ಕೇಂದ್ರ ಕಛೇರಿಯಲ್ಲಿ ಬೆಳೆ ಸಮೀಕ್ಷೆ ಕಾರ್ಯ ನಿರ್ವಹಿಸಲು ಅನುವಾಗುವಂತೆ ತಕ್ಷಣವೇ ನಿಯೋಜಿಸಲು ಸೂಕ್ತ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿದೆ.

ಮುಂದುವರೆದು, ಸದರಿ ಅಧಿಕಾರಿಗಳು 2019–20 ನೇ ಸಾಲಿನಲ್ಲಿ ಬೆಳೆ ಸಮೀಕ್ಷೆ ಕಾರ್ಯವು ಪೂರ್ಣಗೊಳ್ಳುವವರೆಗೆ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣ ಇಲಾಖೆ (ಇ–ಆಡಳಿತ) ರವರ ನೇತೃತ್ವದಲ್ಲಿ ಹಾಗೂ ಮಾರ್ಗದರ್ಶನದಲ್ಲಿ ಕಾರ್ಯ ನಿರ್ವಹಿಸುವುದು.

**ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ**
**ಮತ್ತು ಅವರ ಹೆಸರಿನಲ್ಲಿ**

BSnagarathnam

**(ಬಿ.ಎಸ್.ನಾಗರತ್ನಮ್ಮ)**
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ (ಯೋಜನೆ)

23/7

**<u>ಇವರಿಗೆ:–</u>**

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ) / (ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು–01.
2. ಪ್ರಧಾನ ಮಹಾಲೇಖಪಾಲರು (A&E), ಕರ್ನಾಟಕ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಸಿ.ಆಸು.ಇ(ಇ–ಆಡಳಿತ), ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಕಾರ್ಯದರ್ಶಿ, ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
7. ಕೃಷಿ ಆಯುಕ್ತರು/ಕೃಷಿ ನಿರ್ದೇಶಕರು, ಕೃಷಿ ಇಲಾಖೆ, ಬೆಂಗಳೂರು.

8. ನಿರ್ದೇಶಕರು, ತೋಟಗಾರಿಕ ಇಲಾಖೆ, ಲಾಲಾಬಾಗ್, ಬೆಂಗಳೂರು.
9. ನಿರ್ದೇಶಕರು, ರೇಷ್ಮೆ ಇಲಾಖೆ, ಬೆಂಗಳೂರು.
10. ನಿರ್ದೇಶಕರು, ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯ, ಬೆಂಗಳೂರು.
11. ವ್ಯವಸ್ಥಾಪಕ ನಿರ್ದೇಶಕರು, KAPPEC ಸಂಸ್ಥೆ, ಬೆಂಗಳೂರು.
12. ಸಂಬಂಧಪಟ್ಟ ಅಧಿಕಾರಿಗಳಿಗೆ.
13. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ

ಪ್ರತಿ ಮಾಹಿತಿಗಾಗಿ:

1. ಸರ್ಕಾರದ ಕಾರ್ಯದರ್ಶಿ, ಕೃಷಿ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿ ಕಟ್ಟಡ, ಬೆಂಗಳೂರು.
2. ಸರ್ಕಾರದ ಉಪ ಕಾರ್ಯದರ್ಶಿ–1, ಕೃಷಿ ಇಲಾಖೆ ಇವರ ಆಪ್ತ ಸಹಾಯಕರು, ಬಹುಮಹಡಿ ಕಟ್ಟಡ, ಬೆಂಗಳೂರು